ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/212/ಸಪ್ರಾನೇಬ/2016-17/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 07.08.2017.

# ಸುತ್ತೋಲೆ

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಸ್ಥಳನಿಯುಕ್ತಿ ಕೌನ್ಸಿಲಿಂಗ್ ಬಗ್ಗೆ.

ಉಲ್ಲೇಖ 1) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/128/ಡಿಸಿಇ/2017(1-23), ದಿನಾಂಕ:15.07.2017

2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/128/ ಡಿಸಿಇ/2017(1)(2) (3)(4)(6) (7)(8)(9)(10)(12)(14) (15)(16)(17)(18)(19)(20) ಮತ್ತು (22) ದಿನಾಂಕ:05.08.2017.

3) ದಿನಾಂಕ:04.08.2017ರ ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ

*****

ಉಲ್ಲೇಖ(1) ಮತ್ತು (2)ರ ಸರ್ಕಾರದ ಅಧಿಸೂಚನೆಯಲ್ಲಿ ನೇಮಕಾತಿ ಹೊಂದಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ, ಆಯ್ಕೆ ಪಟ್ಟಿಯಲ್ಲಿರುವ ಇತರ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ, ಉಲ್ಲೇಖ(3)ರ ಈ ಕಛೇರಿಯ ಸುತ್ತೋಲೆಯಲ್ಲಿ ಕೆಲವೊಂದು ದಾಖಲಾತಿಗಳ ಅಗತ್ಯತೆ ಇರುವ ಅಭ್ಯರ್ಥಿಗಳ ಪಟ್ಟಿಯನ್ನು ತಿಳಿಸಲಾಗಿದೆ. ಕೆಲವೊಂದು ಪ್ರಕರಣಗಳಲ್ಲಿ ಸಮನಾಂತರ ವಿಷಯ, ದೂರ ಶಿಕ್ಷಣ, ಹೊರ ರಾಜ್ಯದಿಂದ ಹಾಗೂ ಮುಕ್ತ ವಿಶ್ವವಿದ್ಯಾಲಯಗಳಿಂದ ಪಡೆದಿರುವ ಶೈಕ್ಷಣಿಕ ದಾಖಲಾತಿಗಳ ಬಗ್ಗೆ ಪರಿಶೀಲನೆಗಾಗಿ ಸರ್ಕಾರ ರಚಿಸಿರುವ ಪರಿಣಿತರ ಸಮಿತಿಗೆ ಕಳುಹಿಸಿಕೊಡಲಾಗಿದೆ. ಪರಿಣಿತರ ಸಮಿತಿಯು ನೀಡುವ ಅಂತಿಮ ವರದಿ/ಅಭಿಪ್ರಾಯದಂತೆ ಸರ್ಕಾರದ ಹಂತದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು. ಸರ್ಕಾರ ನೇಮಕಾತಿ ಆದೇಶ ಹೊರಡಿಸಿದ ನಂತರ ಅವರುಗಳಿಗೆ ಶೀಘ್ರದಲ್ಲಿ ಕೌನ್ಸಿಲಿಂಗ್ ನಡೆಸಲಾಗುವುದು. Web-site ಗಮನಿಸುವುದು.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ:**

1. ಸರ್ಕಾರದಿಂದ ನೇಮಕಾತಿ ಆದೇಶ ನೀಡಿಲ್ಲದಿರುವ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ
2. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ಸುತ್ತೋಲೆ ಹಾಗೂ ಅಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.